ಕರ್ನಾಟಕ ಸರ್ಕಾರ

ಸಂ. ಗ್ರಾಅಪ 484 ಗ್ರಾಪಂಕಾ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:12-12-2019

## ಸುತ್ತೋಲೆ

ವಿಷಯ: ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಸ್ಥಳೀಯ ಮಟ್ಟದಲ್ಲಿ ವರ್ಗಾವಣೆ/ನಿಯೋಜನೆ ಮಾಡುತ್ತಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂ. ಗ್ರಾಅಪ 384 ಗ್ರಾಪಂಕಾ 2018 (ಭಾಗ-1), ದಿನಾಂಕ 23.11.2018.

---

ಸರ್ಕಾರದ ಮಾರ್ಗಸೂಚಿಗಳಿಗೆ ವಿರುದ್ಧವಾಗಿ ಸ್ಥಳೀಯ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ವರ್ಗಾವಣೆ /ನಿಯೋಜನೆಗಳನ್ನು ಮಾಡಬಾರದಾಗಿ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.

ಸರ್ಕಾರದ ಅಧಿಕಾರ ವಿಕೇಂದ್ರಿಕರಣ ನೀತಿಯಿಂದಾಗಿ ಪಂಚಾಯತ್ ರಾಜ್ ಸಂಸ್ಥೆಗಳ ಮೇಲೆ ಅಭಿವೃದ್ಧಿ ಕಾರ್ಯಗಳ ಅನುಷ್ಠಾನ ಜವಾಬ್ದಾರಿ ಹೆಚ್ಚಾಗಿರುತ್ತದೆ. ಗ್ರಾಮ ಪಂಚಾಯತಿಗಳ ಪ್ರಕಾರ್ಯಗಳು ಹಾಗೂ ಜವಾಬ್ದಾರಿಗಳು ಗಣನೀಯ ಪ್ರಮಾಣದಲ್ಲಿ ಹೆಚ್ಚಿದ್ದು, ಪ್ರಮುಖ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅತಿ ಹೆಚ್ಚಿನ ಆಯವ್ಯಯ ಹಂಚಿಕೆಯೊಂದಿಗೆ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿದೆ. ರಾಜ್ಯದ ಗ್ರಾಮ ಪಂಚಾಯತಿಗಳು ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಹಲವಾರು ವೈಯುಕ್ತಿಕ, ಸಮುದಾಯ, ಸವಲತ್ತುಗಳನ್ನು ನೀಡುವಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಲ್ಲಿ ಉಲ್ಲೇಖಿಸಿರುವಂತೆ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಈ ಎಲ್ಲಾ ಕಾರ್ಯಕ್ರಮಗಳನ್ನು ಪ್ರಾಮಾಣಿಕವಾಗಿ / ಪಾರದರ್ಶಕವಾಗಿ ಮತ್ತು ಕಾಲಬದ್ಧವಾಗಿ ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಸ್ಥಳೀಯವಾಗಿ ಕಾರ್ಯನಿರ್ವಹಿಸಿ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಉಸ್ತುವಾರಿ ಜವಾಬ್ದಾರಿಯನ್ನು ಹೊರಬೇಕಾಗಿರುತ್ತದೆ.

ತಳಹಂತದ ಪಂಚಾಯತ್ ರಾಜ್ ಸಂಸ್ಥೆಯಾದ ಗ್ರಾಮ ಪಂಚಾಯತಿಗಳನ್ನು ಆಡಳಿತಾತ್ಮಕವಾಗಿ ಸದೃಢಗೊಳಿಸಲು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ವಿಶೇಷ ನಿಯಮಗಳಡಿ ಪ್ರತಿ ಗ್ರಾಮ ಪಂಚಾಯತಿಯ ಕರ್ತವ್ಯ ನಿರ್ವಹಣೆಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ನೇಮಿಸಿಕೊಂಡಿರುವ ಹಾಗೂ ತರಬೇತಿ ಪಡೆದಿರುವ ನೌಕರರನ್ನು ಮತ್ತೊಂದು ಕಡೆ ನಿಯೋಜನೆ / ಒಒಡಿ ಆಧಾರದ ಮೇಲೆ ಸೇವೆ ಸಲ್ಲಿಸುವುದರಿಂದ ಹುದ್ದೆಗಳ ಸೃಜನೆ ಉದ್ದೇಶವೇ ವಿಫಲವಾಗುತ್ತದೆ. ಸದರಿ ವೃಂದದ ಹುದ್ದೆಗಳು ಕಾರ್ಯಕಾರಿ ಹುದ್ದೆಗಳಾಗಿದ್ದು, ಸದರಿ ನೌಕರರು ಲಿಪಿಕ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುವುದು ಸಮಂಜಸವಲ್ಲ.

ಸ್ಥಳೀಯವಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ನಿಯೋಜನೆ / ಅನ್ಯ ಕಾರ್ಯನಿಮಿತ್ತ (ಒಒಡಿ) ಮಾಡಿರುವುದು ಹಾಗೂ ನಿಯೋಜನೆ/ಅನ್ಯಕಾರ್ಯನಿಮಿತ್ತಗಳಲ್ಲಿರುವವರನ್ನು ಮುಂದುವರೆಸಿರುವುದು ಕಂಡುಬಂದಿದೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದ್ದು, ಹೀಗೆ ಮಾಡಲಾದ ಎಲ್ಲಾ ವರ್ಗಾವಣೆ / ನಿಯೋಜನೆ / ಒಒಡಿಗಳನ್ನು ರದ್ದುಗೊಳಿಸಿ, ಮೂಲ ಸ್ಥಾನಗಳಿಗೆ ಹಿಂದಿರುಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

1) ನಿಯೋಜನೆ ಮೇಲೆ ತಾಲ್ಲೂಕು ಪಂಚಾಯತಿ/ಜಿಲ್ಲಾ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಕೂಡಲೇ ಬಿಡುಗಡೆ ಮಾಡಿ ಮೂಲ ಸ್ಥಾನಗಳಿಗೆ ಹಿಂದಿರುಗಿಸಿ ವರದಿ ಮಾಡಿಕೊಳ್ಳಲು ಆದೇಶಿಸುವುದು.

2) ಅನ್ಯ ಇಲಾಖೆಗಳಲ್ಲಿ ಮತ್ತು ಇತರೆಡೆ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಕೂಡಲೇ ಅವರ ನಿಯೋಜನೆ ರದ್ದುಗೊಳಿಸಿ ಅವರ ಸೇವೆಯನ್ನು ಹಿಂಪಡೆದು ಮೂಲ ಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸಿದೆ.

3) ಹೊರ ಜಿಲ್ಲೆಗಳಲ್ಲಿ ಜಿಲ್ಲೆಯಿಂದ ಜಿಲ್ಲೆಗೆ ಸರ್ಕಾರದ ವತಿಯಿಂದ ಮಾಡಲಾದ ಆದೇಶದನ್ವಯ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ನಿಯೋಜನೆಗಳನ್ನು ಕೂಡಲೇ ರದ್ದುಪಡಿಸಿ, ಮೂಲ ಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸಿದೆ.

4) ಹೀಗೆ ರದ್ದುಪಡಿಸಿದ ಆದೇಶಗಳ ರೀತ್ಯಾ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಕೂಡಲೇ ಮೂಲಸ್ಥಾನಗಳಲ್ಲಿ ವರದಿ ಮಾಡಿಕೊಳ್ಳುವುದನ್ನು ಒಂದು ವಾರದಲ್ಲಿ ಖಚಿತಪಡಿಸುವುದು.

5) ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಇಲ್ಲದೆ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಮಟ್ಟದಲ್ಲಿ ಯಾವುದೇ ರೀತಿಯ ವರ್ಗಾವಣೆ/ನಿಯೋಜನೆಗಳನ್ನು ಮಾಡಬಾರದು.

6) ಮೇಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿ, ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ನವೆಂಬರ್-2019 ರ ಅಂತ್ಯದೊಳಗೆ ವರದಿ ನೀಡುವುದು.

ಈ ಆದೇಶ ಪಾಲನೆ ಮಾಡದಿರುವವರ ಹಾಗೂ ಉಲ್ಲಂಘಿಸುವ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು.

(ಎಸ್.ಎ. ಅಶ್ರಫುಲ್ ಹಸನ್)
ನಿರ್ದೇಶಕರು (ಪಂ.ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ;**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.